ಈ) ಮುಂದಿನ ದಿನಗಳಲ್ಲಾದರೂ ಹಂತ ಹಂತವಾಗಿ ಕೆರೆಗಳ ಅಭಿವೃದ್ಧಿ ಮಾಡಲಾಗುವುದೇ,

ಉ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು ಹಾಗೂ ಎಷ್ಟು ಕಾಲಮಿತಿಯೊಳಗೆ ಈ ಎಲ್ಲಾ ಕೆರೆಗಳನ್ನು ಅಭಿವೃದ್ಧಿಪಡಿಸಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಹೌದು

ಆ) ಹೌದು

ಇ) ಪ್ರಸ್ತಾಪಿತ ಕಾಮಗಾರಿಗಳು 2005–06ನೇ ಸಾಲಿನಲ್ಲಿನ ಕಾರ್ಯಕ್ರಮದಲ್ಲಿ ಸೇರದೇ ಇದ್ದುದರಿಂದ ಅವುಗಳ ಟೆಂಡರ್ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಯಿತು

ಈ) ಪರಿಶೀಲಿಸಲಾಗುವುದು

ಉ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

472(677) ಶ್ರೀ ಬಸವರಾಜ್ ರಾಯರೆಡ್ಡಿ (ಯಲಬರ್ಗಾ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಸರ್ಕಾರವು ಮಹಿಳೆಯರಿಗಾಗಿ ವಿಶೇಷವಾಗಿ ಮಹಿಳಾ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗುವುದೆ,

ಆ) ಹಾಗಿದ್ದಲ್ಲಿ ಇದರ ಕಾರ್ಯವ್ಯಾಪ್ತಿ ಮತ್ತು ಉದ್ದೇಶಗಳು ಏನು,

ಇ) ಇದನ್ನು ಯಾವ ಯಾವ ಜಿಲ್ಲೆಗಳಲ್ಲಿ ಸ್ಥಾಪಿಸಲು ಸರ್ಕಾರವು ಉದ್ದೇಶಿಸಿದೆ,

ಈ) ಇದೇ ರೀತಿ ಅಲ್ಪಸಂಖ್ಯಾತರ, ಪರಿಶಿಷ್ಟ ವರ್ಗದವರ, ಪರಿಶಿಷ್ಟ ಜಾತಿಯವರಿಗೆ ಪ್ರತ್ಯೇಕವಾಗಿ ವಿಶ್ವವಿದ್ಯಾಲಯ ಪ್ರಾರಂಭಿಸಲು ಸರ್ಕಾರವು ಉದ್ದೇಶಿಸಿದೆಯೇ?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಈಗಾಗಲೇ ಸ್ಥಾಪಿಸಲಾಗಿದೆ

ಆ) ಮತ್ತು ಇ) ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯದ ಕಾರ್ಯವ್ಯಾಪ್ತಿಯ ರಾಜ್ಯದ 12 ಜಿಲ್ಲೆಗಳಲ್ಲಿ ಅಂದರೆ, ಬಿಜಾಪುರ, ಬಾಗಲಕೋಟೆ, ಧಾರವಾಡ, ಹಾವೇರಿ, ಗದಗ, ಬೆಳಗಾವಿ, ಉತ್ತರ ಕನ್ನಡ, ಗುಲ್ಬರ್ಗಾ, ಬಳ್ಳಾರಿ, ಬೀದರ್, ರಾಯಚೂರು ಮತ್ತು ಕೊಪ್ಪಳಗಳಿಗೆ ವ್ಯಾಪಿಸಿದೆ ಈ ಜಿಲ್ಲೆಗಳ ವ್ಯಾಪ್ತಿಯಲ್ಲಿನ ಮಹಿಳಾ ಕಾಲೇಜುಗಳು ಸದರಿ ವಿಶ್ವವಿದ್ಯಾಲಯದ ಸಂಯೋಜಿತ್ವವನ್ನು ಹೊಂದಿರುತ್ತದೆ ಈ ವಿಶ್ವವಿದ್ಯಾಲಯವನ್ನು ಮಹಿಳೆಯರ ಸಬಲೀಕರಣಕ್ಕಾಗಿ ಹಾಗೂ ಈ ಭಾಗದ ಮಹಿಳೆಯರಿಗೆ ಉನ್ನತ ಶಿಕ್ಷಣವನ್ನು ನೀಡುವ ಮೂಲ ಉದ್ದೇಶದಿಂದ ಸ್ಥಾಪಿಸಲಾಗಿದೆ

ಇ) ಪ್ರಸ್ತುತ ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ

473(678) ಶ್ರೀ ಬಸವರಾಜ ರಾಯರೆಡ್ಡಿ (ಯಲಬುರ್ಗ) ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿ ಸರ್ಕಾರದ ಪ್ರಥಮ ದರ್ಜೆ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಪದವಿ ಕಾಲೇಜುಗಳು ಯಾವ ಯಾವ ಜಿಲ್ಲೆಯಲ್ಲಿ ಎಷ್ಟು ಇವೆ,

ಆ) ಇವುಗಳಿಗೆ ಮಂಜೂರಾದ ಉಪನ್ಯಾಸಕರ ಹಾಗೂ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು,

ಇ) ಇವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ, ಹಾಗೂ ಇವುಗಳನ್ನು ಭರ್ತಿ ಮಾಡಲು ಸರ್ಕಾರವು ತೆಗೆದುಕೊಂಡ ಕ್ರಮಗಳೇನು?

ಶ್ರೀ ಡಿ ಎಚ್ ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು)

ಅ) ಅನುಬಂಧದಲ್ಲಿ ಲಗತ್ತಿಸಿದೆ

ಆ) ಮಂಜೂರಾದ ಉಪನ್ಯಾಸಕರ ಸಂಖ್ಯೆ 3307 ಮಂಜೂರಾದ ಬೋಧಕೇತರ ಹುದ್ದೆಗಳ ಸಂಖ್ಯೆ 1043, ಮಂಜೂರಾದ ಗ್ರೂಪ್-ಡಿ ಹುದ್ದೆಗಳ ಸಂಖ್ಯೆ 1399